ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ,6ನೇ ಅಡ್ಡರಸ್ತೆ, ಮಲ್ಲೇಶ್ವರಂ,ಬೆಂಗಳೂರು–56003.**

ಸಂಖ್ಯೆ:ಕಶಾಪ&ಮೌನಿಮಂ/ಪರೀಕ್ಷೆ/ಗಣಕ/ಸಿಎಸ್–2/2023–24 ದಿನಾಂಕ:05/12/2023

## ಸು ತ್ತೋ ೀ ಲೆ ( ಪರಿಷ್ಕೃತ)

ವಿಷಯ: ಮಾರ್ಚ್–2024 ರಲ್ಲಿ ನಡೆಯುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–1ಕ್ಕೆ ಹೊಸ (REGULAR) ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಲಿಯ ಜಾಲತಾಣದ PU EXAM PORTAL ನಲ್ಲಿ ಅಪ್ಲೋಡ್ ಮಾಡಲು ಕೊನೆಯ ದಿನಾಂಕವನ್ನು 16–12–2023 ಕ್ಕೆ ಮರುನಿಗದಿಪಡಿಸಿರುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:ಇಪಿ.203.ಎಸ್.ಎಲ್.ಬಿ 2023 ದಿನಾಂಕ:21–09–2023.
2. ಮಂಡಲಿಯ ಇದೇ ಸಮಸಂಖ್ಯೆ ಸುತ್ತೋಲೆ ದಿನಾಂಕ:02–11–2023.
3. ಮಂಡಲಿಯ ಇದೇ ಸಮಸಂಖ್ಯೆ ಸುತ್ತೋಲೆ ದಿನಾಂಕ:23–11–2023.
4. ಮಂಡಲಿಯ ಇದೇ ಸಮಸಂಖ್ಯೆ ಸುತ್ತೋಲೆ ದಿನಾಂಕ:04–12–2023.

-----------

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ 2024 ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–1 ಕ್ಕೆ ಹೊಸ (REGULAR) ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಲಿಯ ಜಾಲತಾಣದ (https://kseab.karnataka.gov.in) PU EXAM PORTAL ನಲ್ಲಿ ಅಪ್ಲೋಡ್ ಮಾಡಲು ಉಲ್ಲೇಖ–04 ರಲ್ಲಿ ದಿನಾಂಕ:20–12–2023 ರವರೆಗೆ ಅವಕಾಶ ನೀಡಲಾಗಿತ್ತು.

**ಆದರೆ ಈಗಾಗಲೇ ದ್ವಿತೀಯ ಪಿಯುಸಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. ವಿದ್ಯಾರ್ಥಿಗಳ ದತ್ತಾಂಶವಿಲ್ಲದೆ ಪರೀಕ್ಷಾ ಕೇಂದ್ರಗಳನ್ನು ಅಂತಿಮಗೊಳಿಸಲು ಕಾಲಾವಕಾಶ ಕಡಿಮೆ ಇರುವ ಹಿನ್ನೆಲೆಯಲ್ಲಿ ದಿನಾಂಕ:20–12–2023ರ ಬದಲಾಗಿ ದಿನಾಂಕ:16–12–2023 ಅಂತಿಮ ದಿನಾಂಕವೆಂದು ಮರುನಿಗದಿಪಡಿಸಿದೆ.**

ಆದ್ದರಿಂದ ನಿಗದಿತ ದಿನಾಂಕದೊಳಗೆ ಅಪ್ಲೋಡ್ ಮಾಡುವ ಕಾರ್ಯವನ್ನು ಕಡ್ಡಾಯವಾಗಿ ಪೂರ್ಣಗೊಳಿಸಲು ತಿಳಿಸಿದೆ. ಯಾವುದಾದರೂ ವಿದ್ಯಾರ್ಥಿಗಳ ನೋಂದಣಿ ಮಾಹಿತಿಯನ್ನು ಅಪ್ಲೋಡ್ ಮಾಡದೇ ಇದ್ದಲ್ಲಿ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರೇ ನೇರ ಜವಾಬ್ದಾರರಾಗುತ್ತಾರೆ. ಪೋಷಕರು ಹಾಗೂ ವಿದ್ಯಾರ್ಥಿಗಳನ್ನು ಯಾವುದೇ ಕಾರಣಕ್ಕೂ ನೋಂದಣಿ ವಿಷಯಕ್ಕೆ ಸಂಬಂಧಿಸಿದಂತೆ ಮಂಡಲಿಗೆ ಕಳುಹಿಸದಿರಲು ತಿಳಿಸಿದೆ.

ಮಾನ್ಯ ಅಧ್ಯಕ್ಷರಿಂದ ಅನುಮೋದಿಸಿದೆ.

6/12/2023

ನಿರ್ದೇಶಕರು (ಪಿಯು ಪರೀಕ್ಷೆ)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ.

**ಅಗತ್ಯ ಕ್ರಮಕ್ಕಾಗಿ:–**

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರಿಗೆ.
2) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ.
3) ಹಿರಿಯ ಸಹಾಯಕ ನಿರ್ದೇಶಕರು, ಗಣಕ ಶಾಖೆ, ಕೆ.ಎಸ್.ಇ.ಎ.ಬಿ ರವರಿಗೆ ಮಂಡಲಿಯ ಜಾಲತಾಣದಲ್ಲಿ ಅಳವಡಿಸುವ ಕ್ರಮಕ್ಕಾಗಿ.

**ಪ್ರತಿಗಳನ್ನು ಗೌರವಪೂರ್ವಕವಾಗಿ ಸಲ್ಲಿಸಿದೆ:–**

1) ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು.
2) ಮಾನ್ಯ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–12.
3) ಕಛೇರಿ ಪ್ರತಿ.